## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ರಾಜಕುಮಾರ್ ಎಂ. ತೊರವಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಇಂಡಿ, ಇವರ ವಿರುದ್ಧ ಇಲಾಖಾ ವಿಚಾರಣೆ – ವಿಚಾರಣಾಧಿಕಾರಿಯನ್ನು ನೇಮಿಸುವ ಬಗ್ಗೆ.

ಓದಲಾಗಿದೆ: 1) ಕಾರಣ ಕೇಳುವ ನೋಟಿಸ್ ಸಂಖ್ಯೆ:ಗ್ರಾಅಪ 06 ವಿಸೇಬಿ 2012, ದಿನಾಂಕ:26.07.2012.
2) ಶ್ರೀ ರಾಜಕುಮಾರ್ ಎಂ. ತೊರವಿ, ಇವರ ಲಿಖಿತ ಹೇಳಿಕೆ ದಿನಾಂಕ:09.08.2012

****

**ಪ್ರಸ್ತಾವನೆ:**

ಶ್ರೀ ರಾಜಕುಮಾರ್ ಎಂ. ತೊರವಿ, ಇವರು ಈ ಹಿಂದೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಹುದ್ದೆಯಲ್ಲಿ ಕೆಲಸ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಅಗರಖೇಡ ಗ್ರಾಮ ಪಂಚಾಯತಿಯಲ್ಲಿ, ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಲ್ಲಿ ಅನುಷ್ಠಾನಗೊಂಡಿರುವ ಕಾಮಗಾರಿಗಳ ಭೌತಿಕ ಪರಿಶೀಲನೆ ಮಾಡದಿರುವುದು, ಅನುದಾನ ಬಿಡುಗಡೆ ಮಾಡುವ ಮುನ್ನ ಈ ಹಿಂದೆ ಬಿಡುಗಡೆ ಮಾಡಿರುವ ಅನುದಾನ ಸಮರ್ಪಕವಾಗಿ ವಿನಿಯೋಗವಾಗಿದೆಯೇ ಎಂಬ ಬಗ್ಗೆ ದೃಢೀಕರಣ ಪಡೆದುಕೊಳ್ಳುವ, ಗ್ರಾಮ ಪಂಚಾಯಿತಿಗಳ ತಪಾಸಣೆ ಮಾಡಿ ವರದಿ ಸಲ್ಲಿಸದಿರುವುದು ಹಾಗೂ ಮತ್ತಿತರ ಆರೋಪಗಳ ಬಗ್ಗೆ ಏಕೆ ಶಿಸ್ತು ಕ್ರಮ ಜರುಗಿಸಬಾರದೆಂದು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ:26.07.2012ರ ಕಾರಣ ಕೇಳು ನೋಟೀಸ್‌ನೊಂದಿಗೆ ದೋಷಾರೋಪಣಾ ಪಟ್ಟಿ ಅನುಬಂಧ 1 ರಿಂದ 4ನ್ನು ಜಾರಿ ಮಾಡಿ, ಸದರಿ ಆರೋಪಗಳಿಗೆ ಅವರ ಲಿಖಿತ ಹೇಳಿಕೆಯನ್ನು ಸಲ್ಲಿಸಲು ಸೂಚಿಸಲಾಗಿತ್ತು.

ಶ್ರೀ ರಾಜಕುಮಾರ್ ಎಂ. ತೊರವಿ, ಇವರು ಮೇಲೆ ಕ್ರಮ ಸಂಖ್ಯೆ(2)ರಲ್ಲಿ ಓದಲಾದ ದಿನಾಂಕ: 09.08.2012ರ ಲಿಖಿತ ಹೇಳಿಕೆಯಲ್ಲಿ ಅವರ ವಿರುದ್ಧ ಮಾಡಿರುವ ಎಲ್ಲಾ ಆರೋಪಗಳನ್ನು ನಿರಾಕರಿಸಿರುತ್ತಾರೆ. ಆದುದರಿಂದ, ಆಪಾದಿತರ ಮೇಲಿನ ಆರೋಪಗಳ ಕುರಿತು ಸತ್ಯಾ-ಸತ್ಯತೆಯನ್ನು ಅರಿಯಲು ವಿವರವಾದ ಇಲಾಖಾ ವಿಚಾರಣೆಯನ್ನು ಜರುಗಿಸಲು ನಿರ್ಧರಿಸಿ, ಸರ್ಕಾರವು ಈ ಮುಂದಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 06 ವಿಸೇಬಿ 2012, ಬೆಂಗಳೂರು ದಿನಾಂಕ: 11-10-2012.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳಿಂದ ಶ್ರೀ ರಾಜಕುಮಾರ್ ಎಂ. ತೊರವಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಇಂಡಿ, ಇವರ ವಿರುದ್ಧದ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆಯನ್ನು ಜರುಗಿಸಲು ಶ್ರೀ ಡಿ.ವಿ.ಶೇಟ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಇವರನ್ನು ವಿಚಾರಣಾಧಿಕಾರಿಯನ್ನಾಗಿ ಮತ್ತು ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಬಿಜಾಪುರ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ.

ವಿಚಾರಣಾಧಿಕಾರಿಯವರು ಇಲಾಖಾ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ(ವ.ನಿ.ಮೇ) ನಿಯಮಗಳು 1957ರ ನಿಯಮ 11ರಲ್ಲಿ ನಿಗದಿಪಡಿಸಿರುವ ಕಾರ್ಯವಿಧಾನದ ಪ್ರಕಾರ ಜರುಗಿಸಿ ವಿಚಾರಣಾ ವರದಿಯನ್ನು ನಾಲ್ಕು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗಧಿತ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ರಘುನಾಥ್

(ಹೆಚ್.ಬಿ. ರಘುನಾಥ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

11/10/12

ಗೆ:

1. ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಿಜಾಪುರ
3. ಶ್ರೀ ಡಿ.ವಿ.ಶೇಟ್, ನಿವೃತ್ತ ನ್ಯಾಯಾಧೀಶರು ಹಾಗೂ ವಿಚಾರಣಾಧಿಕಾರಿಗಳು, ಆದರ್ಶ, ಸೈದಾಪೂರ, ಧಾರವಾಡ–580 008.
4. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯಿತಿ, ಬಿಜಾಪುರ (ಮಂಡನಾಧಿಕಾರಿ).
5. ಶ್ರೀ ರಾಜಕುಮಾರ್ ಎಂ. ತೊರವಿ, ಪ್ರಸ್ತುತ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಬಸವನಬಾಗೇವಾಡಿ, ಬಿಜಾಪುರ ಜಿಲ್ಲೆ.
6. ಸರ್ಕಾರದ ಕಾರ್ಯದರ್ಶಿ/ಕಾರ್ಯದರ್ಶಿ(ಪಂ.ರಾಜ್)/ಉಪ ಕಾರ್ಯದರ್ಶಿ(ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಶಾಖೆ.
7. ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
8. ಮಾಹಿತಿ ಕೇಂದ್ರ/ಶಾಖಾ ರಕ್ಷಕ ಕಡತ/ಹೆಚ್ಚುವರಿ ಪ್ರತಿ.